ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	940
ಸದಸ್ಯರ ಹೆಸರು	:	ಶ್ರೀ ಎನ್.ಎಸ್.ಬೋಸ್‌ರಾಜು
ಉತ್ತರಿಸುವ ದಿನಾಂಕ	:	12/03/2020
ಉತ್ತರಿಸುವ ಸಚಿವರು	:	ಮಾನ್ಯ ಗೃಹ ಸಚಿವರು

ಪ್ರಶ್ನೆ	ಉತ್ತರ
ಅ) ರಾಯಚೂರು ನಗರದಲ್ಲಿರುವ ಕೇಂದ್ರ ಕಾರಾಗೃಹವನ್ನು ನಗರದ ಹೊರವಲಯದಲ್ಲಿರುವ ಬೀಜನಗೇರಿ ಗ್ರಾಮದ ಹತ್ತಿರ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಜಿಲ್ಲಾ ಕಾರಾಗೃಹವನ್ನು ಸ್ಥಳಾಂತರಿಸಲು ರಾಯಚೂರು ಜಿಲ್ಲೆಯ ಬೀಜನಗೇರಾ ಗ್ರಾಮದ ಸರ್ವೆ ನಂ.30ರಲ್ಲಿನ 21 ಎಕರೆ 15 ಗುಂಟೆ ಸರ್ಕಾರಿ ಜಮೀನನ್ನು ಗುರುತಿಸಲಾಗಿದ್ದು, ಶೀಘ್ರವಾಗಿ ಮಂಜೂರು ಮಾಡುವಂತೆ ಜಿಲ್ಲಾಡಳಿತವನ್ನು ಕೋರಲಾಗಿದೆ.
ಆ) ರಾಯಚೂರು ಜಿಲ್ಲೆಯಲ್ಲಿ ನೂತನ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಯಚೂರು ಜಿಲ್ಲೆಯ ಲಿಂಗಸುಗೂರಿನಲ್ಲಿ ಹೊಸದಾಗಿ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯುವ ಕುರಿತು ದಿನಾಂಕ:10/12/2019ರಂದು ಪೊಲೀಸ್ ಅಧೀಕ್ಷಕರು, ರಾಯಚೂರು ಜಿಲ್ಲೆರವರು ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ರಾಷ್ಟ್ರೀಯ ಪೊಲೀಸ್ ಆಯೋಗದಲ್ಲಿನ ಮಾರ್ಗಸೂಚಿಯನ್ವಯ ಇರುವ ಮಾನದಂಡಗಳನ್ನು ಪೂರೈಸಿರುವುದಿಲ್ಲ. ಆದಾಗ್ಯೂ ನಿಯಮಾನುಸಾರ ಪರಿಶೀಲಿಸಲಾಗುವುದು.
ಇ) ರಾಯಚೂರು ಜಿಲ್ಲೆಯಲ್ಲಿ ನೂತನ ತಾಲ್ಲೂಕುಗಳಾದ ಸಿರವಾರ, ಮಸ್ಕಿ ತಾಲ್ಲೂಕುಗಳಲ್ಲಿ ಸರ್ಕಲ್ ಇನ್ಸ್ ಪೆಕ್ಟರವರ ಕಛೇರಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ರಾಯಚೂರು ಜಿಲ್ಲೆಯಲ್ಲಿ ಹೊಸದಾಗಿ ಸಿರವಾರ ತಾಲ್ಲೂಕು ಸೃಜನೆಯಾದ ಹಿನ್ನೆಲೆಯಲ್ಲಿ ಸಿರವಾರ ವೃತ್ತ ಕಛೇರಿಯನ್ನು ಪ್ರಾರಂಭಿಸುವ ಕುರಿತಾದ ಪ್ರಸ್ತಾವನೆಯು ಇಲಾಖೆಯಲ್ಲಿ ಪರಿಶೀಲನಾ ಹಂತದಲ್ಲಿರುತ್ತದೆ. ರಾಯಚೂರು ಜಿಲ್ಲೆಯ ಮಸ್ಕಿ ತಾಲ್ಲೂಕಿನಲ್ಲಿ ಮಸ್ಕಿ ವೃತ್ತ ಕಛೇರಿಯು ಈಗಾಗಲೇ ಕಾರ್ಯನಿರ್ವಹಿಸುತ್ತಿರುತ್ತದೆ.
ಈ) ರಾಯಚೂರು ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಸೌಲಭ್ಯ ಒದಗಿಸಲು ಸರ್ಕಾರವು ಪೊಲೀಸ್ ಗೃಹ 2020 ಯೋಜನೆಯನ್ನು ಪ್ರಾರಂಭಿಸಿದ್ದು, ಇದರಡಿಯಲ್ಲಿ ರಾಯಚೂರು ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ 120 ಮತ್ತು ಅಧಿಕಾರಿಗಳಿಗೆ 04 ಒಟ್ಟು 124 ವಸತಿಗೃಹಗಳನ್ನು ಹೊಸದಾಗಿ ನಿರ್ಮಿಸಲಾಗಿರುತ್ತದೆ.

ಸಂಖ್ಯೆ: ಹೆಚ್ ಡಿ 49 ಪಿಆರ್ ಎ 2020

(ಬಸವರಾಜ್ ಬೊಮ್ಮಾಯಿ)
ಗೃಹ ಸಚಿವರು